All India Radio: Bangalore
National Bulletin In Kannada
20.09.2025 : 1310hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
ಮುಖ್ಯಾಂಶಗಳು

- ಗುಜರಾತ್‌ನ ಭಾವನಗರದಲ್ಲಿಂದು ೩೪ ಸಾವಿರದ ೨೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
- ಅಹಮದಾಬಾದ್ - ಮುಂಬೈ ಬುಲೆಟ್ ರೈಲಿನ ಮೊದಲ ಹಂತ ೨೦೨೭ರ ವೇಳೆಗೆ ಕಾರ್ಯಾರಂಭ - ರೈಲ್ವೆ ಸಚಿವ ಅಶ್ವಿನಿ ವೈಷ್ಣವ್
- ಇದೇ ಸೋಮವಾರದಿಂದ ಮೊರಾಕೊಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಎರಡು ದಿನಗಳ ಅಧಿಕೃತ ಭೇಟಿ
- ಏಷ್ಯಾ ಕಪ್ ಟಿ-೨೦ ಕ್ರಿಕೆಟ್ ; ಸೂಪರ್ ೪ ಹಂತದಲ್ಲಿಂದು ಶ್ರೀಲಂಕಾ - ಬಾಂಗ್ಲಾದೇಶ ಮುಖಾಮುಖಿ

><><><><><

ಗುಜರಾತ್‌ನ ಭಾವನಗರದಲ್ಲಿಂದು 'ಸಮುದ್ರದಿಂದ ಸಮೃದ್ಧಿ' ಕಾರ್ಯಕ್ರಮದಲ್ಲಿ ೩೪ ಸಾವಿರದ ೨೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ಇದಕ್ಕೂ ಮುನ್ನ ಭಾವನಗರದ ವಿಮಾನ ನಿಲ್ದಾಣದಿಂದ ಜವಾಹರ್ ಮೈದಾನದ ವರೆಗೆ ಬೃಹತ್ ರೋಡ್ ಶೋ ನಡೆಸಿದರು. ಭೇಟಿಯ ಸಂದರ್ಭದಲ್ಲಿ ಪ್ರಧಾನಿಯವರು ಧೋಲೇರಾದಲ್ಲಿ ವೈಮಾನಿಕ

ಸಮೀಕ್ಷೆಯನ್ನು ಕೈಗೊಳ್ಳಲಿದ್ದಾರೆ. ಮಧ್ಯಾಹ್ನ, ಅವರು ಲೋಥಾಲ್‌ನಲ್ಲಿರುವ ರಾಷ್ಟ್ರೀಯ ಸಾಗರ ಪರಂಪರೆ ಸಂಕೀರ್ಣಕ್ಕೆ ಭೇಟಿ ನೀಡಲಿದ್ದಾರೆ. ಸಮುದ್ರ ವಲಯಕ್ಕೆ ಪ್ರಮುಖ ಉತ್ತೇಜನವಾಗಿ, ಪ್ರಧಾನ ಮಂತ್ರಿಯವರು ೭ ಸಾವಿರದ ೮೭೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಸಾಗರ ವಲಯಕ್ಕೆ ಸಂಬಂಧಿಸಿದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಸಮಗ್ರ ಮತ್ತು ಸುಸ್ಥಿರ ಅಭಿವೃದ್ಧಿಯ ಬದ್ಧತೆಗೆ ಅನುಗುಣವಾಗಿ, ಪ್ರಧಾನಮಂತ್ರಿಯವರು ಗುಜರಾತ್‌ನಲ್ಲಿ ವಿವಿಧ ವಲಯಗಳಿಗೆ ಸಂಬಂಧಿಸಿದ ೨೯ ಸಾವಿರದ ೩೫೮ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಕೇಂದ್ರ ಮತ್ತು ರಾಜ್ಯ ಸರ್ಕಾರದ ಬಹು ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

><><><><><

ಮಹತ್ವಾಕಾಂಕ್ಷೆಯ ಅಹಮದಾಬಾದ್ - ಮುಂಬೈ ಬುಲೆಟ್ ರೈಲಿನ ಮೊದಲ ಹಂತವು ೨೦೨೭ರ ವೇಳೆಗೆ ಕಾರ್ಯಾರಂಭ ಮಾಡಲಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ನವಿ ಮುಂಬೈನಲ್ಲಿಂದು ಘನ್ಸೋಲಿ ಮತ್ತು ಶಿಲ್ಫಾಟ್ ಸುರಂಗಗಳ ಪ್ರಗತಿ ಪರಿಶೀಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯೋಜನೆಯ ಥಾಣೆ ವಿಭಾಗವು ೨೦೨೮ರ ವೇಳೆಗೆ ಪೂರ್ಣಗೊಳ್ಳಲಿದೆ. ಬಾಂದ್ರಾ-ಕುರ್ಲಾ ಸಂಕೀರ್ಣದವರೆಗಿನ ವಿಭಾಗವು ಮುಂದಿನ ವರ್ಷ ಪೂರ್ಣಗೊಳ್ಳಲಿದೆ ಎಂದು ಮಾಹಿತಿ ನೀಡಿದರು. ಈ ಬುಲೆಟ್ ರೈಲು ಅಹಮದಾಬಾದ್ ಮತ್ತು ಮುಂಬೈ ನಡುವಿನ ಪ್ರಯಾಣದ ಸಮಯವನ್ನು ಸುಮಾರು ೨ ಗಂಟೆಗಳ ವರೆಗೆ ತಗ್ಗಿಸುತ್ತದೆ ಮತ್ತು ಈ ಮಾರ್ಗದಲ್ಲಿನ ಪ್ರಮುಖ ಆರ್ಥಿಕ ಕೇಂದ್ರಗಳನ್ನು ಸಂಪರ್ಕಿಸುತ್ತದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

><><><><><

ರಕ್ಷಣಾ ಸಚಿವ ರಾಜನಾಥ್ ಸಿಂಗ್, ಇದೇ ಸೋಮವಾರದಿಂದ ಮೊರಾಕೊಗೆ ಎರಡು ದಿನಗಳ ಅಧಿಕೃತ ಭೇಟಿ ನೀಡಲಿದ್ದಾರೆ. ಇದು ಉತ್ತರ ಆಫ್ರಿಕಾದ ರಾಷ್ಟ್ರವಾದ ಮೊರಾಕೊಗೆ ರಕ್ಷಣಾ ಸಚಿವರ ಮೊದಲ ಭೇಟಿಯಾಗಿದೆ. ಅಲ್ಲದೆ ಭಾರತ ಮತ್ತು ಮೊರಾಕೊ ನಡುವೆ ಬಲಗೊಳ್ಳುತ್ತಿರುವ ಕಾರ್ಯತಂತ್ರದ ಸಂಬಂಧವನ್ನು ಇದು ಪ್ರತಿಬಿಂಬಿಸುತ್ತಿದೆ. ಭೇಟಿಯ ಸಮಯದಲ್ಲಿ ಸಚಿವ ರಾಜನಾಥ್ ಸಿಂಗ್, ಬೆರೆಚಿಡ್‌ನಲ್ಲಿ ಟಾಟಾ ಅಡ್ವಾನ್ಸ್ ಸಿಸ್ಟಮ್ಸ್ ಮೊರಾಕ್‌ನ ನೂತನ ರಕ್ಷಣಾ ಘಟಕವನ್ನು ಉದ್ಘಾಟಿಸಲಿದ್ದಾರೆ. ಈ ಸೌಲಭ್ಯವು ಆಫ್ರಿಕಾದಲ್ಲಿ ಮೊಟ್ಟ ಮೊದಲ ಭಾರತೀಯ ರಕ್ಷಣಾ ಉತ್ಪಾದನಾ ಘಟಕವಾಗಿದ್ದು, ಇದು ಆತ್ಮನಿರ್ಭರ ಭಾರತ್ ಉಪಕ್ರಮದ ಅಡಿಯಲ್ಲಿ ಭಾರತದ ರಕ್ಷಣಾ ಉದ್ಯಮದ ಬೆಳೆಯುತ್ತಿರುವ ಜಾಗತಿಕ ಹೆಜ್ಜೆಗುರುತನ್ನು ಪ್ರತಿಬಿಂಬಿಸುವ ಪ್ರಮುಖ ಮೈಲಿಗಲ್ಲಾಗಿದೆ. ಇದೇ ವೇಳೆ ಸಚಿವ ರಾಜನಾಥ್ ಸಿಂಗ್ ಅವರು, ಮೊರಕೊ ರಕ್ಷಣಾ ಸಚಿವ ಅಬ್ದೆಲ್ಟಿಫ್ ಲೌಡಿಯಿ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ಈ ವೇಳೆ ಉಭಯ ದೇಶಗಳ ನಡುವೆ, ರಕ್ಷಣೆ, ಕಾರ್ಯತಂತ್ರ ಮತ್ತು ಕೈಗಾರಿಕಾ ಸಹಕಾರವನ್ನು ಬಲಪಡಿಸುವ ನಿಟ್ಟಿನಲ್ಲಿ ಮಾತುಕತೆ ನಡೆಯಲಿದೆ. ನಂತರ ಅವರು ಮೊರಾಕೊ ಕೈಗಾರಿಕೆ ಮತ್ತು ವ್ಯಾಪಾರ ಸಚಿವ ರಿಯಾದ್ ಮೆಜ್ಜೌರ್ ಅವರನ್ನು ಭೇಟಿಯಾಗಲಿದ್ದಾರೆ.

><><><><><

ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಧ್ಯೇಯದೊಂದಿಗೆ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಕೇಂದ್ರ ಸರ್ಕಾರ ದೇಶದಲ್ಲಿ ಪರಿವರ್ತನೆ ಮತ್ತು ಪ್ರಗತಿಯನ್ನು ತರಲು

ಅವಿರತವಾಗಿ ಶ್ರಮಿಸುತ್ತಿದೆ. ಈ ಹಿನ್ನೆಲೆಯಲ್ಲಿ ಆಕಾಶವಾಣಿ ಪ್ರಸ್ತುತಪಡಿಸುತ್ತಿರುವ ವಿಶೇಷ ಸರಣಿ - "ಸೇವಾ ಪರ್ವ" ದಲ್ಲಿಂದು, ದೇಶಾದ್ಯಂತ ಪ್ರತಿ ಕುಟುಂಬವನ್ನು ರಕ್ಷಿಸಲು ಕೇಂದ್ರ ಸರ್ಕಾರ ವಿಮಾ ರಕ್ಷಣೆಯನ್ನು ಹೇಗೆ ವಿಸ್ತರಿಸಿದೆ ಎಂಬುವುದರ ಕುರಿತ ಒಂದು ವಿಶೇಷ ವರದಿ ಇದೀಗ ಮೂಡಿಬರಲಿದೆ.

*****ಧ್ವನಿ **** ಚೇತನ್

><><><><><

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಎಲ್ಲಾ ನಾಗರಿಕರಿಗೆ ವಿಮಾ ರಕ್ಷಣೆಯನ್ನು ಒದಗಿಸುವತ್ತ ಗಮನಹರಿಸಿದೆ. ಅಸುರಕ್ಷಿತರನ್ನು ಸುರಕ್ಷಿತಗೊಳಿಸುವ ದೃಷ್ಟಿಕೋನದಿಂದ ಪ್ರಧಾನಿ ನರೇಂದ್ರ ಮೋದಿ ಅವರು ೨೦೧೫ರ ಮೇ ನಲ್ಲಿ ಪ್ರಧಾನಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ ಮತ್ತು ಪ್ರಧಾನಿಮಂತ್ರಿ ಸುರಕ್ಷಾ ಬಿಮಾ ಯೋಜನೆಯನ್ನು ಒಳಗೊಂಡ ಜನಸುರಕ್ಷಾ ಯೋಜನೆಗಳನ್ನು ಪ್ರಾರಂಭಿಸಿದರು. ಇದು ಎಲ್ಲರಿಗೂ ಕೈಗೆಟಕುವ ದರದಲ್ಲಿ ವಿಮೆಯನ್ನು ಒದಗಿಸುತ್ತದೆ. ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆಯನ್ನು ಅಪಘಾತದ ಕಾರಣದಿಂದಾಗಿ ಸಾವು ಅಥವಾ ಅಂಗವೈಕಲ್ಯಕ್ಕೆ ಕನಿಷ್ಠ ಪ್ರೀಮಿಯಂನಲ್ಲಿ ಎರಡು ಲಕ್ಷ ರೂಪಾಯಿಗಳ ವರೆಗೆ ರಕ್ಷಣೆಯನ್ನು ಒದಗಿಸಲು ವಿನ್ಯಾಸಗೊಳಿಸಲಾಗಿದೆ. ಪ್ರಧಾನಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆಯನ್ನು ಯಾವುದೇ ಕಾರಣದಿಂದ ಸಂಭವಿಸಿದ ಮರಣಕ್ಕೆ ಕನಿಷ್ಠ ಪ್ರೀಮಿಯಂನಲ್ಲಿ ಜೀವ ವಿಮಾ ರಕ್ಷಣೆಯನ್ನು ಒದಗಿಸಲು ವಿನ್ಯಾಸಗೊಳಿಸಲಾಗಿದೆ. ಯೋಜನೆಗೆ ಚಾಲನೆ ನೀಡಿದ ಸಂದರ್ಭದಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಇದು ಸಮಾಜದ ದುರ್ಬಲ ವರ್ಗಗಳ ಭದ್ರತೆಗೆ ಸಹಾಯ ಮಾಡುತ್ತದೆ ಎಂದು ಹೇಳಿದ್ದರು.

ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆಯು ಸರ್ಕಾರದಿಂದ ಸಂಪೂರ್ಣವಾಗಿ ಹಣಕಾಸು ಒದಗಿಸುವ ವಿಶ್ವದ ಅತಿದೊಡ್ಡ ಆರೋಗ್ಯ ವಿಮೆ ಮತ್ತು ಭರವಸೆಯ ಯೋಜನೆಯಾಗಿದೆ. ಇದು ದೇಶದ ಸಾರ್ವಜನಿಕ ಮತ್ತು ಪಟ್ಟಿ ಮಾಡಲಾದ ಖಾಸಗಿ ಆಸ್ಪತ್ರೆಗಳಲ್ಲಿ ಪ್ರತಿ ಕುಟುಂಬಕ್ಕೆ ವರ್ಷಕ್ಕೆ ೫ ಲಕ್ಷ ರೂಪಾಯಿಗಳ ವಿಮಾ ರಕ್ಷಣೆಯನ್ನು ಒದಗಿಸುತ್ತದೆ.

><><><><><

ಭಾರತೀಯ ರೂಪಾಯಿಯನ್ನು ಅಂತಾರಾಷ್ಟ್ರೀಯಗೊಳಿಸುವ ದೊಡ್ಡ ಗುರಿಯನ್ನು ಆರ್‌ಬಿಐ ಹೊಂದಿದೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಹೇಳಿದ್ದಾರೆ. ಮುಂಬೈನಲ್ಲಿ ನಡೆದ ಕ್ಲಿಯರಿಂಗ್ ಕಾರ್ಪೊರೇಷನ್ ಆಫ್ ಇಂಡಿಯಾದ ೨೫ನೇ ವಾರ್ಷಿಕೋತ್ಸವ ಉದ್ದೇಶಿಸಿ ಮಾತನಾಡಿದ ಅವರು, ಅಮೆರಿಕನ್ ಡಾಲರ್ ಮತ್ತು ದೇಶೀಯ ಕರೆನ್ಸಿಯನ್ನು ಮೀರಿ ವ್ಯಾಪಾರ ಮತ್ತು ವ್ಯವಹಾರವನ್ನು ಸಕ್ರಿಯಗೊಳಿಸಲು ಸಿಸಿಐಎಲ್ ಮೂಲಸೌಕರ್ಯ ನಿರ್ಮಿಸುವತ್ತ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು. ವಿದೇಶಿ ವಿನಿಮಯ ಮತ್ತು ಸರ್ಕಾರಿ ಭದ್ರತೆಗಳ ಕ್ಷೇತ್ರದಲ್ಲಿ ಚಿಲ್ಲರೆ ಹೂಡಿಕೆದಾರರಿಗೆ ತಮ್ಮ ಕೊಡುಗೆಯನ್ನು ಬಲಪಡಿಸುವಂತೆ ಅವರು ಇದೇ ವೇಳೆ ಒತ್ತಾಯಿಸಿದರು.

><><><><><

ಇರಾನ್‌ನಲ್ಲಿ ಉದ್ಯೋಗ ಭರವಸೆಗಳ ಬಗ್ಗೆ ಎಲ್ಲಾ ನಾಗರಿಕರು ಜಾಗರೂಕತೆ ವಹಿಸಬೇಕೆಂದು ಭಾರತ ಎಚ್ಚರಿಸಿದೆ. ಪ್ರವಾಸೋದ್ಯಮ ಉದ್ದೇಶಗಳಿಗಾಗಿ ಮಾತ್ರ ಇರಾನ್ ಸರ್ಕಾರ, ಭಾರತೀಯರಿಗೆ ವೀಸಾ ಮುಕ್ತ ಪ್ರವೇಶವನ್ನು ಅನುಮತಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಉದ್ಯೋಗ ಅಥವಾ ಇತರೆ ಉದ್ದೇಶಗಳಿಗಾಗಿ ಇರಾನ್‌ಗೆ ವೀಸಾ ಮುಕ್ತ

ಪ್ರವೇಶವನ್ನು ಭರವಸೆ ನೀಡುವ ಯಾವುದೇ ಏಜೆಂಟರು ಕ್ರಿಮಿನಲ್ ಗ್ಯಾಂಗ್‌ಗಳೊಂದಿಗೆ ಶಾಮೀಲಾಗಿರಬಹುದು ಎಂದು ಅದು ಹೇಳಿದೆ.

><><><><><

ರಷ್ಯಾದ ಸಾರಾಟೋವ್ ಮತ್ತು ಸಮಾರಾ ಪ್ರಾಂತ್ಯಗಳಲ್ಲಿರುವ ತೈಲ ಸಂಸ್ಕರಣಾಗಾರಗಳ ಮೇಲೆ ಉಕ್ರೇನ್ ದಾಳಿ ನಡೆಸಿದೆ ಎಂದು ವರದಿಯಾಗಿದೆ. ಇದು ರಷ್ಯಾ ಆದಾಯದ ಪ್ರಮುಖ ಮೂಲವಾಗಿದೆ. ಸಾರಾಟೋವ್ ನಗರದ ಹೊರ ವಲಯದಲ್ಲಿರುವ ತೈಲ ಸಂಸ್ಕರಣಾಗಾರದ ಮೇಲೆ ಡ್ರೋನ್ ದಾಳಿ ನಡೆದಿದೆ. ಈ ಕುರಿತ ವಿಡಿಯೋಗಳನ್ನು ಸ್ಥಳೀಯರು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

><><><><><

ಏಷ್ಯಾ ಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಸೂಪರ್ ೪ ಹಂತದಲ್ಲಿ ಇಂದು ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಶ್ರೀಲಂಕಾ ಮತ್ತು ಬಾಂಗ್ಲಾದೇಶ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಭಾರತ ನಾಳೆ ಇದೇ ಸ್ಥಳದಲ್ಲಿ ತನ್ನ ಮೊದಲ ಸೂಪರ್ ೪ ಪಂದ್ಯದಲ್ಲಿ ಪಾಕಿಸ್ತಾನವನ್ನು ಎದುರಿಸಲಿದೆ.

><><><><><

ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿಯು ಚೀನಾ ಮಾಸ್ಟರ್ಸ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಡಬಲ್ಸ್ ವಿಭಾಗದ ಸೆಮಿಫೈನಲ್

ಪ್ರವೇಶಿಸಿದ್ದಾರೆ. ಚೀನಾದ ಶೆನ್‌ಝೆನ್ ಅರೆನಾದಲ್ಲಿ ನಿನ್ನೆ ನಡೆದ ಕ್ವಾರ್ಟರ್ ಫೈನಲ್ಸ್ ಪಂದ್ಯದಲ್ಲಿ ಈ ಜೋಡಿಯು ಚೀನಾದ ರೆನ್ ಜಿಯಾಂಗ್ ಯು ಮತ್ತು ಕ್ಸಿ ಹೌನನ್ ಜೋಡಿಯನ್ನು ೨೧-೧೪, ೨೧-೧೪ ಸೆಟ್‌ಗಳಿಂದ ಪರಾಭವಗೊಳಿಸಿತು. ಇಂದು ನಡೆಯಲಿರುವ ಸೆಮಿಫೈನಲ್ ಪಂದ್ಯದಲ್ಲಿ ಸಾತ್ವಿಕ್ ಮತ್ತು ಚಿರಾಗ್ ಶೆಟ್ಟಿ ಜೋಡಿಯು ಮಲೇಷ್ಯಾದ ಅರುನ್ ಚಿಯಾ ಮತ್ತು ಸೋ ಹು ಯಿಕ್ ಜೋಡಿಯನ್ನು ಎದುರಿಸಲಿದೆ.

><><><><><

ದುಬೈನಲ್ಲಿ ನಡೆದ ೨೮ನೇ ಯುಪಿಯು ಸಮಾವೇಶದಲ್ಲಿ ಭಾರತವನ್ನು ಯುನಿವರ್ಸಲ್ ಪೋಸ್ಟಲ್ ಯೂನಿಯನ್‌ನ ಆಡಳಿತ ಮಂಡಳಿ ಮತ್ತು ಅಂಚೆ ಕಾರ್ಯಾಚರಣೆ ಮಂಡಳಿಗೆ ಮರು ಆಯ್ಕೆ ಮಾಡಲಾಗಿದೆ. ಭಾರತದ ಮರು ಆಯ್ಕೆಯು ಇಂಡಿಯಾ ಪೋಸ್ಟ್‌ನ ನಾಯಕತ್ವ, ಸುಧಾರಣೆಗಳು ಮತ್ತು ನವೀನ ಡಿಜಿಟಲ್ ಉಪಕ್ರಮಗಳಲ್ಲಿ ಅಂತಾರಾಷ್ಟ್ರೀಯ ಸಮುದಾಯದ ವಿಶ್ವಾಸವನ್ನು ಪ್ರತಿಬಿಂಬಿಸುತ್ತದೆ ಎಂದು ಕೇಂದ್ರ ಸಂವಹನ ಸಚಿವಾಲಯ ತಿಳಿಸಿದೆ.

><><><END><><><